ಕರ್ನಾಟಕ ಸರ್ಕಾರದ ನಡವಳಿಗಳು

181
12/01/16

ವಿಷಯ: ಮೆ: ಸೋಲಾರ್ ಫೀಲ್ಡ್ಸ್ ಎನರ್ಜಿ ಪೋಟೊವೊಲ್ಟಾಯಿಕ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಕಂಪನಿಗೆ ಕಲಬುರ್ಗಿ ಜಿಲ್ಲೆಯ ಸೇಡಂ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ತತ್ವಶಃ ಅನುಮೋದನೆ ನೀಡಿರುವ 30 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಹಂಚಿಕೆ ಆದೇಶ ನೀಡುವ ಬಗ್ಗೆ.

ಓದಲಾಗಿದೆ:
1 ಸರ್ಕಾರದ ಪತ್ರ ಸಂಖ್ಯೆ: ಇಎನ್ 294 ಎನ್‌ಸಿಇ 2012 ದಿನಾಂಕ: 26.09.2012
2 ಸರ್ಕಾರದ ಪತ್ರ ಸಂಖ್ಯೆ: ಇಎನ್ 126 ಎನ್‌ಸಿಇ 2013(4)ದಿನಾಂಕ: 02.08.2013
3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರ ಪತ್ರ ಸಂಖ್ಯೆ: KRED/08/SFEPVIPL-30 to 86 MW/Gulburga/2014/ 4216 ದಿನಾಂಕ:18.10.2014.

* * *

**ಪ್ರಸ್ತಾವನೆ :-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಪತ್ರದಲ್ಲಿ ದಿನಾಂಕ: 05.05.2012 ರಂದು ನಡೆದ ಹಂಚಿಕೆ ಸಮಿತಿಯ ನಿರ್ಣಯದಂತೆ ಮೆ: ಸೋಲಾರ್ ಫೀಲ್ಡ್ಸ್ ಎನರ್ಜಿ ಪೋಟೊವೊಲ್ಟಾಯಿಕ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಕಂಪನಿಯವರಿಗೆ ಕಲಬುರ್ಗಿ ಜಿಲ್ಲೆಯ ಸೇಡಂ ತಾಲ್ಲೂಕಿನ ಮೇಡಕ್, ಪಾಕಲ್, ಶಂಕರಾಜಮುರ, ನಡೆಪಲ್ಲಿ, ನೇಗಟ್ ಮತ್ತು ರಬ್ಬನ್‌ಪಲ್ಲಿ ಗ್ರಾಮಗಳಲ್ಲಿ 30 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಘಟಕ ಸ್ಥಾಪಿಸಲು 1 ವರ್ಷದ ಅವಧಿಯಲ್ಲಿ ಡಿಪಿಆರ್ ಸಲ್ಲಿಸುವ ಷರತ್ತಿಗೊಳಪಟ್ಟು ಸರ್ಕಾರದಿಂದ ತತ್ವಶಃ ಅನುಮೋದನೆ ನೀಡಲಾಗಿರುತ್ತದೆ. ನಂತರ, ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರದ ಪತ್ರದಲ್ಲಿ ಸದರಿ ಯೋಜನೆಗೆ ಡಿಪಿಆರ್ ಸಲ್ಲಿಸುವ ಅವಧಿಯನ್ನು 2 ವರ್ಷಗಳಿಗೆ ವಿಸ್ತರಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಬೆಂಗಳೂರು ಇವರು ಮೆ: ಸೋಲಾರ್ ಫೀಲ್ಡ್ಸ್ ಎನರ್ಜಿ ಪೋಟೊವೊಲ್ಟಾಯಿಕ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಬೆಂಗಳೂರು ಕಂಪನಿಯು ತಮಗೆ ತತ್ವಶಃ ಹಂಚಿಕೆಯಾಗಿರುವ 30 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 86 ಮೆ.ವ್ಯಾ. ಸಾಮರ್ಥ್ಯಕ್ಕೆ ವೃದ್ಧಿಸಲು ಕೊರಿ ಡಿಪಿಆರ್ ಅನ್ನು ಸಲ್ಲಿಸಿದ್ದು, ಯೋಜನೆಯ ಪ್ರದೇಶವು ಖಾಸಗಿ ಭೂಮಿಯಾಗಿದ್ದು, ಹೆಚ್ಚಳಗೊಳ್ಳಲಿರುವ ಸಾಮರ್ಥ್ಯವನ್ನು ಸಹ ಸದರಿ ಸ್ಥಳದಲ್ಲಿಯೇ ಅನುಷ್ಠಾನಗೊಳಿಸುವುದಾಗಿ ತಿಳಿಸಿರುವುದನ್ನು ಪರಿಗಣಿಸಿ, ಸದರಿ ಕಂಪನಿಗೆ ಹಂಚಿಕೆಯಾಗಿರುವ 30 ಮೆ.ವ್ಯಾ. ಸಾಮರ್ಥ್ಯದ ಯೋಜನೆಯನ್ನು 86 ಮೆ.ವ್ಯಾ.ಗೆ ಹೆಚ್ಚಿಸಿ, ನಿಯಮಾನುಸಾರ ಯೋಜನೆಯ ಡಿಪಿಆರ್ ಶುಲ್ಕವನ್ನು ಒಡಂಬಡಿಕೆ ಮಾಡಿಕೊಳ್ಳುವ ಮುನ್ನ ಕ್ರೆಡಲ್‌ಗೆ ಸಂದಾಯ ಮಾಡುವ ಷರತ್ತಿಗೊಳಪಟ್ಟು ಹಂಚಿಕೆ ಆದೇಶವನ್ನು ನೀಡಬಹುದೆಂದು ಶಿಫಾರಸ್ಸು ಮಾಡಿ, ಸದರಿ ಯೋಜನೆಗೆ ಸಂಬಂಧಿಸಿದ ತಾಂತ್ರಿಕ ವಿವರಗಳು, ಸ್ಥಳದ ಮಾಹಿತಿ, ಅಕ್ಷಾಂಶ ಮತ್ತು ರೇಖಾಂಶ ಹಾಗೂ ಇನ್ನಿತರೆ ವಿವರಗಳೊಂದಿಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಈ ಮಧ್ಯ ಅಭಿವೃದ್ಧಿದಾರರು ದಿನಾಂಕ: 21.12.2015 ರಂದು ಸರ್ಕಾರಕ್ಕೆ ಮನವಿ ಸಲ್ಲಿಸಿ, ತಾವು ಈ ಹಿಂದೆ ಡಿಪಿಆರ್ ಸಲ್ಲಿಸುವಾಗ ಈ ಯೋಜನೆಗೆ 2.00 ಮೆ.ವ್ಯಾ. ಸಾಮರ್ಥ್ಯದ ಟರ್ಬೈನ್‌ಗಳನ್ನು ಅವಳಡಿಸಿಕೊಳ್ಳುವುದಾಗಿ ತಿಳಿಸಿದ್ದು, ಪ್ರಸ್ತುತ, ತಮ್ಮ ಕಂಪನಿಯು ಸ್ವತಃ ತಯಾರಿಸಿರುವ 3 ಮೆ.ವ್ಯಾ. ಸಾಮರ್ಥ್ಯದ ಟರ್ಬೈನ್‌ಗಳನ್ನು ಅಳವಡಿಸಿಕೊಳ್ಳಲು ಅನುಮತಿ ನೀಡುವಂತೆ ಕೋರಿರುತ್ತಾರೆ. ಅದರಂತೆ, 3MW x 28WTG ಹಾಗೂ 2 MW x 1 WTG ಗಳನ್ನು ಅಳವಡಿಸುವುದಾಗಿ ತಿಳಿಸಿರುತ್ತಾರೆ.

--2)

G.M
K.R.E.D.L.

Wind Sector
59
16-01-2016

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಸಲ್ಲಿಸಿರುವ ಪ್ರಸ್ತಾವನೆ ಹಾಗೂ ಅಭಿವೃದ್ಧಿದಾರರ ಕೋರಿಕೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ : ಇಎನ್ 237 ಎನ್‌ಸಿಇ 2014,
ಬೆಂಗಳೂರು, ದಿನಾಂಕ : 02.01.2016.

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಸರ್ಕಾರವು, ಮೆ: ಸೋಲಾರ್ ಫೀಲ್ಡ್ಸ್ ಎನರ್ಜಿ ಫೋಟೊವೋಲ್ಟಾಯಿಕ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಬೆಂಗಳೂರು ಕಂಪನಿಯವರಿಗೆ ಕಲಬುರ್ಗಿ ಜಿಲ್ಲೆಯ ಸೇಡಂ ತಾಲ್ಲೂಕಿನ ಮೇಡಕ್, ಪಾಕಲ್, ಶಂಕರಾಜಪುರ, ನಡೆಪಲ್ಲಿ, ನೇಗಟ್ ಮತ್ತು ರಬ್ಬನ್‌ಪಲ್ಲಿ ಗ್ರಾಮಗಳಲ್ಲಿ ತತ್ವಶಃ ಹಂಚಿಕೆಯಾಗಿರುವ 30 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯವನ್ನು 86 ಮೆಗಾ ವ್ಯಾಟ್‌ಗೆ ಹೆಚ್ಚಿಸಿ, ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ನಿಬಂಧನೆ ಮತ್ತು ಷರತ್ತಿಗೊಳಪಟ್ಟು ಹಂಚಿಕೆ ಮಾಡಿ ಆದೇಶಿಸಲಾಗಿದೆ.

Geographical area description for 86 MW capacity wind power project

| Sl. No. | Toposheet No. | Proposed Enhaced capacity in MW | Near by villages of the proposed area and district | Geographical Area Details of the Project |
|---|---|---|---|---|
| 1 | 56 H/5 & 56 H/8 | 86 MW (28 Nos x 3MW and 1No x 2MW) | Medak, Pakhal, Shankarajapur, Nadepalli, Nelaghat & Rabbanpalli in Sedam taluk, Kalaburagi district. | **Part A**: The identified area is coverd in Private land near Yadgir Reserve Forest and near Andhra Pradesh Border, With no. Of open scrub festures and road crossing towards Gurumatkal. The area is held in the following Geographical co-ordinates as:<br>**Latitude**: 16°57'27.5"- 17°01'20.3" N<br>**Longitude**: 77°24'50"- 77°28'55" E<br>**peaks: 627, 623, 611, 590, 611, 629, 587, 571, 605, 539, 617 & 517** m Amsl |
| | Total | 86 MW | | |

ಷರತ್ತುಗಳು:-

1. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 06.1.2012 ರನ್ವಯ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
2. ಅಭಿವೃದ್ಧಿದಾರರು ಈ ಯೋಜನೆಯನ್ನು ಸರ್ಕಾರಿ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ: 19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011 ದಿನಾಂಕ: 18.07.2011 ರಲ್ಲಿ ನಿಗದಿಪಡಿರುವ ಅವಧಿಯೊಳಗಾಗಿ (ಅಂದರೆ 6 ವರ್ಷಗಳ ಒಳಗಾಗಿ) ಅನುಷ್ಠಾನಗೊಳಿಸತಕ್ಕದ್ದು.
3. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.
4. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.
5. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ / ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಕೈಗೊಳ್ಳುತ್ತಿರುವುದರಿಂದ, ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.

6. ಅಭಿವೃದ್ಧಿದಾರರು ಸಂಬಂಧಿಸಿದ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ ನಿಯಮಾನುಸಾರ ವಿದ್ಯುತ್ ಖರೀದಿ ಒಡಂಬಡಿಕೆ / ಕೆ.ಪಿ.ಟಿ.ಸಿ.ಎಲ್.ನೊಂದಿಗೆ ವೀಲಿಂಗ್ ಆಂಡ್ ಬ್ಯಾಂಕಿಂಗ್ ಮೂಲಕ ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಒಡಂಬಡಿಕೆ ಮಾಡಿಕೊಳ್ಳಲು ಅನುಮತಿಸಿದೆ.
7. ಸರ್ಕಾರಿ ಆದೇಶ ಸಂ:ಇಎನ್ 95 ಇಬಿಎಸ್ 2009 ದಿ:29.12.2009 ರನ್ವಯ ಅರ್ಹ ವಿನಾಯಿತಿ ಸೌಲಭ್ಯಗಳು ಅನ್ವಯಿಸುವುದು.
8. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.
9. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆಗೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.
10. ಸದರಿ ಕಂಪನಿಯವರು ಯೋಜನೆಗೆ ಸಂಬಂಧಿಸಿದಂತೆ ಬಾಕಿ ಇರುವ ಡಿಪಿಆರ್ ಮೊತ್ತ ಹಾಗೂ ಇನ್ನಿತರೆ ಶುಲ್ಕಗಳನ್ನು ಒಡಂಬಡಿಕೆ ಮಾಡಿಕೊಳ್ಳುವ ಮುನ್ನ ಕೆ.ಆರ್.ಇ.ಡಿ.ಎಲ್.ಗೆ ಸಂದಾಯ ಮಾಡತಕ್ಕದ್ದು.
11. ಕರ್ನಾಟಕ ಭೂಸುಧಾರಣ ಕಾಯ್ದೆ 1961 ಕಲಂ 109 ರಡಿ ಕಂದಾಯ ಇಲಾಖೆಯಿಂದ ಅನುಮತಿ ಪಡೆದುಕೊಂಡು ಭೂಪರಿವರ್ತನೆಯಾದ ನಂತರವೇ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಕೆ ಮಾಡಿಕೊಳ್ಳತಕ್ಕದ್ದು.

ಸದರಿ ಆದೇಶವನ್ನು ರದ್ದುಪಡಿಸುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.
ನ 21/1/16.

ಇವರಿಗೆ:
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಣೆಗಾಗಿ.

ಪ್ರತಿ:
1 ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು 560001.
2 ಪ್ರಧಾನ ಮಹಾಲೇಖಪಾಲರು (ಇ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು – 560001
3 ಪ್ರಧಾನ ಮಹಾಲೇಖಪಾಲರು (ಎ & ಇ) ರವರ ಕಾರ್ಯದರ್ಶಿ, ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು – 560001.
4 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ/ ಬಹುಮಹಡಿ ಕಟ್ಟಡ/ವಿಕಾಸ ಸೌಧ, ಬೆಂಗಳೂರು–1.
5 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು), ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
6 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು–9.